All India Radio: Bangalore
National Bulletin In Kannada
19.04.2025 : 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

********

ಮುಖ್ಯಾಂಶಗಳು :

1. ೨೦೩೦ರ ವೇಳೆಗೆ ಭಾರತದ ರಕ್ಷಣಾ ರಫ್ತು ೫೦ ಸಾವಿರ ಕೋಟಿ ರೂಪಾಯಿಗೆ ಏರಿಕೆ - ರಕ್ಷಣಾ ಸಚಿವ ರಾಜನಾಥ್ ಸಿಂಗ್ ವಿಶ್ವಾಸ
2. ಕಳೆದ ಹತ್ತು ವರ್ಷಗಳಲ್ಲಿ ದೇಶದ ವಿದ್ಯುನ್ಮಾನ ಉತ್ಪಾದನೆ ೫ ಪಟ್ಟು ಹೆಚ್ಚಳ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್
3. ಎರಡು ಸಾವಿರ ರೂಪಾಯಿಗಳಿಗಿಂತ ಹೆಚ್ಚಿನ ಯುಪಿಐ ವಹಿವಾಟುಗಳ ಮೇಲೆ ಜಿಎಸ್‌ಟಿ ವಿಧಿಸುವ ಪ್ರಸ್ತಾಪ ಸರ್ಕಾರದ ಎದುರಿಲ್ಲ - ಹಣಕಾಸು ಸಚಿವಾಲಯ ಸ್ಪಷ್ಟನೆ
4. ಐಪಿಎಲ್-ಟಿ೨೦ ಕ್ರಿಕೆಟ್; ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಪಂಜಾಬ್ ಕಿಂಗ್ಸ್‌ಗೆ ೫ ವಿಕೆಟ್ ಜಯ

*****

೨೦೩೦ರ ವೇಳೆಗೆ ಭಾರತದ ರಕ್ಷಣಾ ರಫ್ತು ೫೦ ಸಾವಿರ ಕೋಟಿ ರೂಪಾಯಿ ತಲುಪಲಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಮಹಾರಾಷ್ಟ್ರದ ಛತ್ರಪತಿ ಸಂಭಾಜಿನಗರದಲ್ಲಿ ನಿನ್ನೆ ಮರಾಠವಾಡ ಕೈಗಾರಿಕೆಗಳು ಮತ್ತು ಕೃಷಿ ಮಂಡಳಿ ಆಯೋಜಿಸಿದ್ದ 'ಮರಾಠವಾಡ - ಆತ್ಮನಿರ್ಭರ ಭಾರತದ ರಕ್ಷಾ ಭೂಮಿ' ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಪ್ರಸ್ತುತ ಆಡಳಿತದ ಅವಧಿಯಲ್ಲಿ ರಕ್ಷಣಾ ರಫ್ತು ನಲವತ್ತು ಪಟ್ಟು ಹೆಚ್ಚಾಗಿದೆ. ೨೦೧೪ರಲ್ಲಿ, ೬೦೦ ಕೋಟಿ ರೂಪಾಯಿಯಷ್ಟಿದ್ದ ಭಾರತದ ರಕ್ಷಣಾ ರಫ್ತು ಇಂದು ೨೪ ಸಾವಿರ ಕೋಟಿ ರೂಪಾಯಿಗೆ ಏರಿದೆ ಎಂದು ಅವರು ಮಾಹಿತಿ ನೀಡಿದರು.

ರಾಜಸ್ಥಾನ ರಾಜ್ಯಪಾಲ ಹರಿಭಾವು ಬಾಗ್ಡೆ, ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಸೇರಿದಂತೆ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಪ್ರಸ್ತುತ ೧೦ ಸಾವಿರ ಎಕರೆಗಳಲ್ಲಿ ವ್ಯಾಪಿಸಿರುವ ದೆಹಲಿ-ಮುಂಬೈ ಕೈಗಾರಿಕಾ ಕಾರಿಡಾರ್ ವಿಸ್ತರಣೆಗಾಗಿ ಹೆಚ್ಚುವರಿಯಾಗಿ ೮ ಸಾವಿರ ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಮಾಹಿತಿ ನೀಡಿದರು. ಸಂವಾದದ ನಂತರ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ವೀರ ಶಿರೋಮಣಿ ಮಹಾರಾಣಾ ಪ್ರತಾಪ್ ಅವರ ಪ್ರತಿಮೆಯನ್ನು ಅನಾವರಣಗೊಳಿಸಿದರು.

*****

ಕಳೆದ ಹತ್ತು ವರ್ಷಗಳಲ್ಲಿ ದೇಶದ ವಿದ್ಯುನ್ಮಾನ ಉತ್ಪಾದನೆ ೫ ಪಟ್ಟು ಹೆಚ್ಚಾಗಿದೆ ಎಂದು ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಹರಿಯಾಣದ ಗುರುಗ್ರಾಮದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೇಕ್ ಇನ್ ಇಂಡಿಯಾ ಉಪಕ್ರಮದಿಂದಾಗಿ ಎಲೆಕ್ಟ್ರಾನಿಕ್ಸ್ ಉತ್ಪಾದನಾ ವಲಯ ಗಮನಾರ್ಹ ಪ್ರಗತಿ ಸಾಧಿಸಿದೆ. ಕಳೆದ ಹತ್ತು ವರ್ಷಗಳಲ್ಲಿ ವಿದ್ಯುನ್ಮಾನ ರಫ್ತು ೩ ಲಕ್ಷದ ೨೫ ಸಾವಿರ ಕೋಟಿ ರೂಪಾಯಿ ಮೀರುವ ಮೂಲಕ ಆರು ಪಟ್ಟು ಹೆಚ್ಚಳ ದಾಖಲಿಸಿದೆ ಎಂದು ತಿಳಿಸಿದರು.

ವಿದ್ಯುನ್ಮಾನ ಉತ್ಪಾದನಾ ವಲಯ ಇಂದು ಸುಮಾರು ೨೫ ಲಕ್ಷ ಜನರಿಗೆ ಉದ್ಯೋಗ ನೀಡುತ್ತಿದೆ. ವಿನ್ಯಾಸ, ಉತ್ಪಾದನೆ, ಕೌಶಲ್ಯ ಮತ್ತು ನಾವಿನ್ಯತೆ ಕುರಿತಂತೆ ಭಾರತ ಅನುಸರಿಸುತ್ತಿರುವ ಸಮಗ್ರ ವಿಧಾನ ರಾಷ್ಟ್ರವನ್ನು ಜಾಗತಿಕ ಎಲೆಕ್ಟ್ರಾನಿಕ್ಸ್ ಭೂದೃಶ್ಯದಲ್ಲಿ ಮುಂದಾಳತ್ವದ ಸ್ಥಾನದಲ್ಲಿರಿಸಲಿದೆ ಎಂದರು.

*****

ಪ್ರಧಾನಿ ನರೇಂದ್ರ ಮೋದಿ ಅವರು ಸಂಸ್ಕೃತಿಯ ಕುರಿತು ಅವರ ಚಿಂತನೆಗಳು ಮತ್ತು ಭಾಷಣಗಳನ್ನು ಒಳಗೊಂಡ ಸಂಕಲನ "ಸಂಸ್ಕೃತಿ ಕಾ ಪಾಂಚವಾ ಅಧ್ಯಾಯ" ಪುಸ್ತಕವನ್ನು ನವದೆಹಲಿಯಲ್ಲಿ ನಿನ್ನೆ ಬಿಡುಗಡೆ ಮಾಡಲಾಯಿತು.ಈ ಪುಸ್ತಕವನ್ನು ಜುನಾ ಅಖಾಡದ ಮುಖ್ಯಸ್ಥ

ಆಚಾರ್ಯ ಮಹಾಮಂಡಲೇಶ್ವರ ಪೂಜ್ಯ ಸ್ವಾಮಿ ಅವಧೇಶಾನಂದ ಗಿರಿ ಮಹಾರಾಜ್ ಅವರು ಬಿಡುಗಡೆ ಮಾಡಿದರು. ಈ ಪುಸ್ತಕವು ಭಾರತೀಯ ಸಂಸ್ಕೃತಿ, ಸಂಪ್ರದಾಯಗಳು, ಆಧ್ಯಾತ್ಮಿಕ ಮೌಲ್ಯಗಳು ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಎತ್ತಿ ತೋರಿಸುವ ವಿವಿಧ ಸಂದರ್ಭಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ನೀಡಿದ ಭಾಷಣಗಳ ಸಂಗ್ರಹವಾಗಿದೆ.

*****

ಎರಡು ಸಾವಿರ ರೂಪಾಯಿಗಳಿಗಿಂತ ಹೆಚ್ಚಿನ ಯುಪಿಐ ವಹಿವಾಟುಗಳ ಮೇಲೆ ಜಿಎಸ್‌ಟಿ ವಿಧಿಸುವ ಬಗ್ಗೆ ಚಿಂತನೆ ನಡೆಸುತ್ತಿರುವುದಾಗಿ ಹರಡುತ್ತಿರುವ ವದಂತಿಗಳು ಸತ್ಯಕ್ಕೆ ದೂರವಾಗಿದ್ದು, ದಾರಿತಪ್ಪಿಸುವಂತಿವೆ ಎಂದು ಸರ್ಕಾರ ತಿಳಿಸಿದೆ. ಈ ಕುರಿತಂತೆ ಹೇಳಿಕೆ ಬಿಡುಗಡೆಗೊಳಿಸಿರುವ ಕೇಂದ್ರ ಹಣಕಾಸು ಸಚಿವಾಲಯ, ಈ ರೀತಿಯ ಯಾವುದೇ ಪ್ರಸ್ತಾಪ ಸರ್ಕಾರದ ಎದುರಿಲ್ಲ, ಕೆಲವು ಸಾಧನಗಳನ್ನು ಬಳಸಿಕೊಂಡು ಮಾಡಿದ ಪಾವತಿಗಳಿಗೆ ಸಂಬಂಧಿಸಿದ ವ್ಯಾಪಾರಿ ರಿಯಾಯಿತಿ ದರ ಎಂಡಿಆರ್‌ನಂತಹ ಶುಲ್ಕಗಳ ಮೇಲೆ ಮಾತ್ರ ಜಿಎಸ್‌ಟಿ ವಿಧಿಸಲಾಗುತ್ತದೆ. ಇನ್ನು ೨೦೨೦ರಿಂದ ಜಾರಿಗೆ ಬಂದಿರುವಂತೆ ನೇರ ತೆರಿಗೆಗಳ ಕೇಂದ್ರ ಮಂಡಳಿ - ಸಿಬಿಡಿಟಿ, ವ್ಯಕ್ತಿಯಿಂದ ವ್ಯಾಪಾರಿ ಪಿಟು-ಎಂ, ಯುಪಿಐ ವಹಿವಾಟುಗಳ ಮೇಲಿನ ಎಂಡಿಆರ್‌ಅನ್ನು ತೆಗೆದುಹಾಕಿದೆ ಎಂದು ಸಚಿವಾಲಯ ತಿಳಿಸಿದೆ. ಪ್ರಸ್ತುತ ಯುಪಿಐ ವಹಿವಾಟುಗಳ ಮೇಲೆ ಯಾವುದೇ ವ್ಯಾಪಾರಿ ರಿಯಾಯಿತಿ ದರ ವಿಧಿಸದ ಕಾರಣ ಈ ವಹಿವಾಟುಗಳಿಗೆ ಜಿಎಸ್‌ಟಿ ಅನ್ವಯಿಸುವುದಿಲ್ಲ ಮತ್ತು ಯುಪಿಐ ಮೂಲಕ ಡಿಜಿಟಲ್ ಪಾವತಿಗಳನ್ನು ಉತ್ತೇಜಿಸಲು ಸರ್ಕಾರ ಬದ್ಧವಾಗಿದೆ ಎಂದು ಸಚಿವಾಲಯ ಸ್ಪಷ್ಟಪಡಿಸಿದೆ.

*****

ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಎಲ್ ಮುರುಗನ್ ಅವರು ಮುಂಬೈನಲ್ಲಿ ನಿನ್ನೆ ನಡೆದ ವಿಶ್ವ ಆಡಿಯೋ ವಿಷುಯಲ್ ಮನರಂಜನಾ ಶೃಂಗಸಭೆ - ವೇವ್ಸ್ ೨೦೨೫ರ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಜಿಯೋ ವರ್ಲ್ಡ್ ಕನ್ವೆನ್ಷನ್ ಸೆಂಟರ್‌ನಲ್ಲಿ ನಡೆದ ಪರಿಶೀಲನಾ ಸಭೆಯಲ್ಲಿ ಭಾರತ ಸರ್ಕಾರ ಮತ್ತು ಮಹಾರಾಷ್ಟ್ರ ರಾಜ್ಯ ಸರ್ಕಾರದ ನೋಡಲ್ ಅಧಿಕಾರಿಗಳು ಭಾಗವಹಿಸಿದ್ದರು. ವೇವ್ಸ್‌ನ ನಾಲ್ಕು ಸ್ತಂಭಗಳಾದ ಪ್ರಸಾರ ಮತ್ತು ಮನರಂಜನೆ, **AVGC-XR,,**

ಡಿಜಿಟಲ್ ಮಾಧ್ಯಮ ಮತ್ತು ನಾವೀನ್ಯತೆ ಹಾಗೂ ಚಲನಚಿತ್ರಗಳ ಅಡಿಯಲ್ಲಿ ವಿವಿಧ ಚಟುವಟಿಕೆಗಳ ಪ್ರಗತಿಯನ್ನು ಸಭೆಯಲ್ಲಿ ಚರ್ಚಿಸಲಾಯಿತು. ವೇವ್ಸ್ ಬಜಾರ್, ವೇವೆಕ್ಸ್, ಭಾರತ್ ಪೆವಿಲಿಯನ್, ಕ್ರಿಯೇಟ್ ಇನ್ ಇಂಡಿಯಾ ಚಾಲೆಂಜಸ್ ಮತ್ತು ಇತರ ವಿವಿಧ ಉಪಕ್ರಮಗಳ ಅಡಿಯಲ್ಲಿ ಕೈಗೊಳ್ಳಲಾಗುತ್ತಿರುವ ಕಾರ್ಯಚಟುವಟಿಕೆಗಳ ಪ್ರಗತಿಯನ್ನು ಮತ್ತು ಮುಂದಿನ ಹಾದಿಯ ಬಗ್ಗೆ ಚರ್ಚಿಸಲಾಯಿತು. ಇದೇ ವೇಳೆ ಎಲ್. ಮುರುಗನ್ ಶೃಂಗಸಭೆ ನಡೆಯುವ ಸ್ಥಳದ  ಸಿದ್ಧತೆಗಳ ಪರಿಶೀಲನೆ ನಡೆಸಿದರು.

*****

ಪ್ರಸಕ್ತ ವರ್ಷದ ಜಂಟಿ ಪ್ರವೇಶ ಪರೀಕ್ಷೆ - ಜೆಇಇ ಮೇನ್ ಸೆಷನ್ ಎರಡರ ಫಲಿತಾಂಶ ಇಂದು ಪ್ರಕಟಿಸಲಾಗುವುದು ಎಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ - ಎನ್‌ಟಿಎ ತಿಳಿಸಿದೆ. ಫಲಿತಾಂಶ ಜಾಲತಾಣ **jeemain.nta.nic.in** ದಲ್ಲಿ ಲಭ್ಯವಿರಲಿದೆ. ಎನ್‌ಟಿಎ ಜೆಇಇ ಮೇನ್ ೨೦೨೫ರ ಫಲಿತಾಂಶವನ್ನು ಕಟ್-ಆಫ್ ಸಮೇತವಾಗಿ ಪ್ರಕಟಿಸಲಿದೆ. ಜೆಇಇ ಮೇನ್‌ನ ಏಪ್ರಿಲ್ ಸೆಷನ್‌ಅನ್ನು ಇದೇ ತಿಂಗಳ ೨ ರಿಂದ ೯ರ ನಡುವೆ ಎನ್‌ಟಿಎ ನಡೆಸಿತ್ತು. ಜೆಇಇ ಮೇನ್ - ೨೦೨೫ ಈ ವರ್ಷ ಜನವರಿ ಮತ್ತು ಏಪ್ರಿಲ್‌ನಲ್ಲಿ ಎರಡು ಸುತ್ತುಗಳಲ್ಲಿ ನಡೆಸಲಾಗಿದೆ. ಎರಡು ಬಾರಿ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿ ಎರಡರಲ್ಲಿ ಉತ್ತಮ ಅಂಕಗಳಿಸಿದ ಪರೀಕ್ಷೆಯನ್ನು ಅಂತಿಮ ಅರ್ಹತಾ ಪಟ್ಟಿಗೆ ಪರಿಗಣಿಸಲಾಗುವುದು ಎಂದು ಎನ್‌ಟಿಎ ತಿಳಿಸಿದೆ. ಫಲಿತಾಂಶದ ಜೊತೆಗೆ ಎನ್‌ಟಿಎ, ಅಗ್ರ ಅಂಕಗಳಿಸಿದವರ ಪಟ್ಟಿ ಮತ್ತು ಜೆಇಇ ಅಡ್ವಾನ್ಸ್ಡ್ - ೨೦೨೫ರ ಕಟ್ ಆಫ್ ಅನ್ನೂ ಸಹ ಪ್ರಕಟಿಸುವ ನಿರೀಕ್ಷೆ ಇದೆ.

*****

ಛತ್ತೀಸ್‌ಗಢದ ಸುಕ್ಮಾ ಜಿಲ್ಲೆಯ ಬಡೇಸಟ್ಟಿ ಗ್ರಾಮವು ಬಸ್ತಾರ್ ವಿಭಾಗದ ಮೊದಲ ನಕ್ಸಲ್ ಮುಕ್ತ ಗ್ರಾಮ ಪಂಚಾಯತ್ ಆಗಿ ಹೊರಹೊಮ್ಮಿದೆ. ಈ ಗ್ರಾಮದಲ್ಲಿ ಸಕ್ರಿಯವಾಗಿದ್ದ ೧೧ ಮಾವೋವಾದಿಗಳು ನಿನ್ನೆ ಸುಕ್ಮಾದಲ್ಲಿ ಪೊಲೀಸ್ ವರಿಷ್ಠಾಧಿಕಾರಿಯ ಮುಂದೆ ಶರಣಾಗಿದ್ದಾರೆ. ಮಾರ್ಚ್ ೨೦೨೬ ರೊಳಗೆ ದೇಶವನ್ನು ನಕ್ಸಲ್ ಮುಕ್ತಗೊಳಿಸುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ನಿರ್ಣಯವನ್ನು ಈಡೇರಿಸುವತ್ತ ಛತ್ತೀಸ್‌ಗಢ ವೇಗವಾಗಿ ಸಾಗುತ್ತಿದೆ.

*****

೧೫ನೇ ಬ್ರಿಕ್ಸ್ ಕೃಷಿ ಸಚಿವರ ಸಭೆಯಲ್ಲಿ ಭಾರತವು, ಸಮಗ್ರ, ಸಮಾನ ಮತ್ತು ಸುಸ್ಥಿರ ಕೃಷಿಗೆ ತನ್ನ ಬದ್ಧತೆಯನ್ನು ಪುನರುಚ್ಚರಿಸಿದೆ. ಬ್ರೆಜಿಲ್‌ನಲ್ಲಿ ನಿನ್ನೆ ನಡೆದ ಸಭೆಯಲ್ಲಿ ಮಾತನಾಡಿದ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಸಣ್ಣ ರೈತರನ್ನು ರಕ್ಷಿಸದ ಮತ್ತು ಸಬಲೀಕರಣಗೊಳಿಸದ ಹೊರತು ಜಾಗತಿಕ ಆಹಾರ ಭದ್ರತಾ ಗುರಿಗಳು ಈಡೇರುವುದಿಲ್ಲ. ಭಾರತದಲ್ಲಿ ಮಹಿಳೆಯರನ್ನು ಸಾಮಾಜಿಕವಾಗಿ, ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಸಬಲೀಕರಣಗೊಳಿಸುವುದು ಧ್ಯೇಯವಾಗಿದೆ ಎಂದು ಅವರು ಒತ್ತಿ ಹೇಳಿದರು. ಭಾರತಕ್ಕೆ ಕೃಷಿ ಕೇವಲ ಆರ್ಥಿಕ ಚಟುವಟಿಕೆಯಲ್ಲ, ಆದರೆ ಲಕ್ಷಾಂತರ ಕುಟುಂಬಗಳಿಗೆ ಜೀವನೋಪಾಯ, ಆಹಾರ ಮತ್ತು ಘನತೆಯ ಮೂಲವಾಗಿದೆ. ವಿಶ್ವದ ೫೧೦ ಮಿಲಿಯನ್ ಸಣ್ಣ ಹಿಡುವಳಿದಾರ ರೈತರು ಜಾಗತಿಕ ಆಹಾರ ವ್ಯವಸ್ಥೆಯ ಬೆನ್ನೆಲುಬಾಗಿದ್ದಾರೆ ಮತ್ತು ಹವಾಮಾನ ಬದಲಾವಣೆ, ಬೆಲೆ ಏರಿಳಿತ ಮತ್ತು ಸಂಪನ್ಮೂಲ ಕೊರತೆಯ ಸಂದರ್ಭದಲ್ಲಿ ಅವರು ಅತ್ಯಂತ ದುರ್ಬಲರಾಗಿದ್ದಾರೆ ಎಂದು ಅವರು ಹೇಳಿದರು.

*****

ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ಮಳೆಯ ಕಾರಣ ತಲಾ ೧೪ ಓವರ್‌ಗಳಿಗೆ ಸೀಮಿತವಾದ ಐಪಿಎಲ್ ಟಿ೨೦ ಕ್ರಿಕೆಟ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡವು - ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ೫ ವಿಕೆಟ್‌ಗಳಿಂದ ಮಣಿಸಿದೆ. ಮೊದಲು ಬ್ಯಾಟ್ ಮಾಡಿದ ಆರ್‌ಸಿಬಿ ನಿಗದಿತ ೧೪ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೯೫ ರನ್‌ಗಳಿಸಿದೆ. ಒಂದು ಹಂತದಲ್ಲಿ ೪೨ರನ್‌ಗೆ ೭ ವಿಕೆಟ್ ಕಳೆದುಕೊಂಡು ದಯನೀಯ ಸ್ಥಿತಿಯಲ್ಲಿದ್ದ ಆರ್‌ಸಿಬಿಗೆ, ಟಿಮ್ ಡೇವಿಡ್ ಅವರ ಅಜೇಯ ಅರ್ಧಶತಕ ಆಸರೆಯಾಯಿತು. ೯೬ ರನ್‌ಗಳ ಗುರಿ ಬೆನ್ನತಿದ ಪಂಜಾಬ್ ತಂಡ ೧೨.೧ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೯೮ ರನ್‌ಗಳಿಸಿ ಗೆಲುವು ತನ್ನದಾಗಿಸಿಕೊಂಡಿತು. ಇಂದು ಎರಡು ಪಂದ್ಯಗಳು ನಡೆಯಲಿದ್ದು, ಅಹಮದಾಬಾದ್‌ನಲ್ಲಿ ನಡೆಯಲಿರುವ ಮೊದಲ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ತಂಡವು ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ಎದುರಿಸಲಿದೆ, ಪಂದ್ಯ ಮಧ್ಯಾಹ್ನ ೩:೩೦ಕ್ಕೆ ಆರಂಭವಾಗಲಿದೆ. ಜೈಪುರನಲ್ಲಿ ನಡೆಯಲಿರುವ ದಿನದ ಎರಡನೇ ಪಂದ್ಯದಲ್ಲಿ

ರಾಜಸ್ಥಾನ ರಾಯಲ್ಸ್ ಹಾಗೂ ಲಕ್ನೋ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭:೩೦ ಕ್ಕೆ ಆರಂಭವಾಗಲಿದೆ.

*****